ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕಿಯರು ಸಹಾಯಕಿಯರು

552 (519) ಶ್ರೀ ಮಹೇಶ್ ಎಸ್.ಆರ್. (ಕೃಷ್ಣರಾಜನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕಿಯರು ಮತ್ತು ಸಹಾಯಕಿಯರಿಗೆ ನೀಡುತ್ತಿರುವ ಗೌರವಧನದ ಮೊತ್ತವೆಷ್ಟು;

ಆ) ಇವರುಗಳಿಗೆ ನೀಡುತ್ತಿರುವ ಗೌರವ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಗೌರವ ಧನ ಹೆಚ್ಚಿಸಲಾಗುವುದು;

ಈ) ಇವರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು (ವಿವರ ನೀಡುವುದು)?

ಶ್ರೀ ಕಳಸಪ್ಪ ಜಿ. ಬಂಡಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಆ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. 2011–12ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಕಾರ್ಯಕರ್ತೆಯರಿಗೆ ರೂ.1500/– ಹಾಗೂ ಸಹಾಯಕಿಯರಿಗೆ ರೂ.750/– ಹೆಚ್ಚಿಸಿರುತ್ತದೆ. ಮತ್ತು ರಾಜ್ಯ ಸರ್ಕಾರ ಕಾರ್ಯಕರ್ತೆಯರಿಗೆ ರೂ.500/– ಹಾಗೂ ಸಹಾಯಕಿಯರಿಗೆ ರೂ.250/– ಹೆಚ್ಚಿಸಿರುತ್ತದೆ.

ಇ) ಉದ್ಭವಿಸುವುದಿಲ್ಲ.

ಈ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. ದಿನಾಂಕ: 07–12–2006ರ ಸರ್ವೋಚ್ಚ ನ್ಯಾಯಾಲಯದ ಆದೇಶದಲ್ಲಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸಾಧ್ಯವಿಲ್ಲವೆಂದು ತಿಳಿಸಿರುವುದರಿಂದ ಇವರನ್ನು ಖಾಯಂ ಗೊಳಿಸಲು ಸಾಧ್ಯವಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 519 ಕ್ಕೆ ಅನುಬಂಧ

ಕ್ರ ಸಂ.	ವಿದ್ಯಾರ್ಹತೆಯ ವಿವರ	ಭಾರತ ಸರ್ಕಾರ ದಿಂದ ನೀಡುತ್ತಿರುವ ಗೌರವ ಧನ (ರೂ.ಗಳಲ್ಲಿ)	ರಾಜ್ಯ ಸರ್ಕಾರದಿಂದ ನೀಡುತ್ತಿರುವ ಹೆಚ್ಚುವರಿ ಗೌರವ ಧನ (ರೂ.ಗಳಲ್ಲಿ)	ಒಟ್ಟು (ರೂ.ಗಳಲ್ಲಿ)
1	ಕಾರ್ಯಕರ್ತೆಯರಿಗೆ ಎಸ್.ಎಸ್.ಎಲ್.ಸಿ. ಅನುತೀರ್ಣ	ರೂ.2938	ರೂ.1500	ರೂ.4438
2	ಎಸ್.ಎಸ್.ಎಲ್.ಸಿ. ಅನುತೀರ್ಣ ಜೊತೆಗೆ 5 ವರ್ಷದ ಅನುಭವ	ರೂ.2969	ರೂ.1500	ರೂ.4469
3	ಎಸ್.ಎಸ್.ಎಲ್.ಸಿ. ಅನುತೀರ್ಣ ಜೊತೆಗೆ 10 ವರ್ಷದ ಅನುಭವ	ರೂ.3000	ರೂ.1500	ರೂ.4500
4	ಎಸ್.ಎಸ್.ಎಲ್.ಸಿ. ಉತ್ತೀರ್ಣ	ರೂ.3000	ರೂ.1500	ರೂ.4500
5	ಎಸ್.ಎಸ್.ಎಲ್.ಸಿ. ಉತ್ತೀರ್ಣ	ರೂ.3031	ರೂ.1500	ರೂ.4531

	ಜೊತೆಗೆ 5 ವರ್ಷದ ಅನುಭವ			
6	ಎಸ್.ಎಸ್.ಎಲ್.ಸಿ. ಉತ್ತೀರ್ಣ ಜೊತೆಗೆ 10 ವರ್ಷದ ಅನುಭವ	ರೂ.3063	ರೂ.1500	ರೂ.4563
7	ಅಂಗನವಾಡಿ ಸಹಾಯಕಿಯರು	ರೂ.1500	ರೂ.750	ರೂ.2250
8	ಮಿನಿ ಅಂಗನವಾಡಿ ಕಾರ್ಯಕರ್ತೆಯರು	ರೂ.1500	ರೂ.750	ರೂ.2250

ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಯೋಜನೆ

525 (522) ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಯೋಜನೆಯಡಿಯಲ್ಲಿ ಉಡುಪಿ ಜಿಲ್ಲೆ ಸೇರಿದಂತೆ ರಾಜ್ಯದ ಯಾವ ಯಾವ ಪ್ರೌಢ ಶಾಲೆಗಳಿಗೆ ಎಷ್ಟು ಮೊತ್ತದ ಕೊಠಡಿಗಳನ್ನು ಮಂಜೂರು ಮಾಡಲಾಗಿರುತ್ತದೆ (ಶಾಲಾವಾರು, ಕೊಠಡಿವಾರು ಹಾಗೂ ವಾರ್ಷಿಕವಾರು ವಿವರ ನೀಡುವುದು); ಈ ಯೋಜನೆ ಇನ್ನೂ ಅನುಷ್ಠಾನ ಆಗದೆ ಇರಲು ಕಾರಣವೇನು;

ಆ) ಈ ಯೋಜನೆಗೆ ಈ ವರೆಗೂ ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ಹಾಗೂ ರಾಜ್ಯ ಸರ್ಕಾರದಿಂದ ಎಷ್ಟು ಅನುದಾನವನ್ನು ಬಿಡುಗಡೆಯಾಗಿದೆ? (ಮಾಹಿತಿ ನೀಡುವುದು);

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮ ದಡಿಯಲ್ಲಿ 2009–10 ಮತ್ತು 2010–11 ನೇ ಸಾಲಿಗೆ ಹಾಲಿ ಕಾರ್ಯನಿರ್ವಹಿಸುತ್ತಿರುವ ಪ್ರೌಢ ಶಾಲೆಗಳ ಬಲವರ್ಧನೆಯಡಿಯಲ್ಲಿ ಮಂಜೂರಾಗಿರುವ ಕೊಠಡಿಗಳ ವಿವರವನ್ನು ಅನುಬಂಧದಲ್ಲಿ ನೀಡಿದೆ.